**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗದ ಹಾಗೂ ಅದರ ಅಧ್ಯಕ್ಷರು ಮತ್ತು ಸದಸ್ಯರ ಅವಧಿಯನ್ನು ವಿಸ್ತರಿಸುವ ಬಗ್ಗೆ.

**ಓದಲಾಗಿದೆ:**

1. ಅಧಿಸೂಚನೆ ಸಂಖ್ಯೆ: ಸಂವ್ಯಶಾ 37 ಶಾಸನ 2021, ದಿನಾಂಕ: 18-09-2021.
2. ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪಂರಾ 319 ಜಿಪಸ 2021, ಬೆಂಗಳೂರು, ದಿನಾಂಕ:13-10-2021.
3. ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪಂರಾ 319 ಜಿಪಸ 2021, ಬೆಂಗಳೂರು, ದಿನಾಂಕ:13-10-2021.
4. ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪಂರಾ 319 ಜಿಪಸ 2021, ಬೆಂಗಳೂರು, ದಿನಾಂಕ:20-11-2021.

**ಪ್ರಸ್ತಾವನೆ :**

ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳ ಚುನಾವಣಾ ಕ್ಷೇತ್ರಗಳ ಸೀಮಾ ನಿರ್ಣಯ, ಚುನಾಯಿತ ಸದಸ್ಯರ ಸಂಖ್ಯೆಯ ನಿರ್ಣಯದ ಪ್ರಕ್ರಿಯೆಯನ್ನು ಕೈಗೊಳ್ಳುವ ಸಲುವಾಗಿ ಕರ್ನಾಟಕ ರಾಜ್ಯ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ಉಲ್ಲೇಖ (1)ರ ಸರ್ಕಾರದ ಆದೇಶದ ಅನುಸಾರ ರಚಿಸಲಾಗಿರುತ್ತದೆ ಹಾಗೂ ಉಲ್ಲೇಖ (2) & (3)ರ ಅನುಸಾರ ಕರ್ನಾಟಕ ರಾಜ್ಯ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗಕ್ಕೆ ಅಧ್ಯಕ್ಷರು ಮತ್ತು ಸದಸ್ಯರುಗಳನ್ನು ನೇಮಿಸಲಾಗಿದೆ. ಅದರಂತೆ, ಆಯೋಗವು ತನ್ನ ಕರ್ತವ್ಯ ನಿರ್ವಹಿಸುತ್ತಿದ್ದು, ಆರು ತಿಂಗಳ ಅವಧಿಯನ್ನು ನಿಗಧಿಪಡಿಸಲಾಗಿತ್ತು. ಈಗ ಸದರಿ ಆರು ತಿಂಗಳ ಅವಧಿಯು ಮುಕ್ತಾಯಗೊಂಡಿದ್ದು, ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳ ಚುನಾವಣಾ ಕ್ಷೇತ್ರಗಳ ಸೀಮಾ ನಿರ್ಣಯ ಪ್ರಕ್ರಿಯೆಯು ಮುಕ್ತಾಯಗೊಂಡಿಲ್ಲದಿರುವ ಹಿನ್ನೆಲೆಯಲ್ಲಿ ಆಯೋಗದ ಮತ್ತು ಅಧ್ಯಕ್ಷರು ಹಾಗೂ ಸದಸ್ಯರ ಅವಧಿಯನ್ನು ಮುಂದಿನ ಆರು ತಿಂಗಳುಗಳ ಅವಧಿಗೆ ಮುಂದುವರೆಸುವುದು ಅವಶ್ಯಕವಾಗಿರುತ್ತದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪಂರಾ 319 ಜಿಪಸ 2021, ಬೆಂಗಳೂರು, ದಿನಾಂಕ:18-06-2022**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯ ಸರ್ಕಾರವು ದಿನಾಂಕ:13-10-2021ರ ಆದೇಶದನ್ವಯ ರಚಿಸಲಾದ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗದ ಅವಧಿ ಮತ್ತು ಅದರ ಅಧ್ಯಕ್ಷರು ಮತ್ತು ಸದಸ್ಯರ ಅವಧಿಯನ್ನು ದಿನಾಂಕ:13-04-2022 ರಿಂದ ಅನ್ವಯವಾಗುವಂತೆ ಮುಂದಿನ ಆರು (06) ತಿಂಗಳ ಅವಧಿಗೆ ವಿಸ್ತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

M.M. Raju 18/6/22

**(ಎಂ.ಎಂ.ರಾಜು)**
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

18/6/2022

**ಗೆ,**

**ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಹಾಗೂ ನಿರ್ದೇಶಕರು ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಮೇಲ್ಕಂಡ ಆದೇಶವನ್ನು ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಒದಗಿಸುವಂತೆ ಕೋರಲಾಗಿದೆ.**

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.

2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳ ಮತ್ತು ಶಾಸನ ರಚನೆ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಕಾನೂನು ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕೃಷ್ಣ ದೇವರಾಯ ಎಜುಕೇಷನ್ ಟ್ರಸ್ಟ್ ಕಟ್ಟಡ, ಬಳ್ಳಾರಿ ರಸ್ತೆ, ಬೆಂಗಳೂರು.
7. ಆಯುಕ್ತರು(ಪಂ.ರಾಜ್), ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ.ರಸ್ತೆ, ಬೆಂಗಳೂರು.
8. ರಾಜ್ಯದ ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.
9. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
10. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
11. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-6), ವಿಧಾನ ಸೌಧ, ಬೆಂಗಳೂರು.
13. ಇಲಾಖಾ ವೈಬ್‌ಸೈಟ್.
14. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

**ಪ್ರತಿಯನ್ನು:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಮಾನ್ಯ ಕಾನೂನು ಸಂಸದೀಯ ವ್ಯವಹಾರ ಮತ್ತು ಶಾಸನ ರಚನಾ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಜಂಟಿ ಕಾರ್ಯದರ್ಶಿ (ಸಚಿವ ಸಂಪುಟ), ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.